ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT: ಕರ್ನಾಟಕ ವಿಧಾನ ಮಂಡಲ ಅಧಿವೇಶನ

ಪತ್ರಿಕೆಯ ಹೆಸರು : NAME OF THE NEWS PAPER: ವಿಜಯ ವಾಣಿ ದಿನಾಂಕ : DATE : 17/9/19

## ಈ ಬಾರಿ ಬೆಳಗಾವಿಯಲ್ಲ ಬೆಂಗಳೂರಿನಲ್ಲೇ ಸೆಷನ್

# ಅ.14ರಿಂದ 10 ದಿನ ಅಧಿವೇಶನ

17-9-19

■ ವಿಜಯವಾಣಿ ಸುದ್ದಿಜಾಲ ಬೆಂಗಳೂರು

ಈ ಬಾರಿಯ ಚಳಿಗಾಲದ ಅಧಿವೇಶನ ರಾಜಧಾನಿಯಲ್ಲಿಯೇ ನಡೆಯಲಿದ್ದು, ಅಕ್ಟೋಬರ್ 14ರಿಂದ 25ರವರೆಗೆ ನಡೆಸಲು ರಾಜ್ಯ ಸರ್ಕಾರ ಚಿಂತಿಸಿದೆ. ಉಳಿದ ಐದು ತಿಂಗಳ ಅವಧಿಯ ಬಜೆಟ್‌ಗೆ ಈ ಸಂದರ್ಭ ಒಪ್ಪಿಗೆ ಪಡೆಯಲಾಗುತ್ತದೆ.



ಪ್ರವಾಹ ಪರಿಸ್ಥಿತಿ ಹಿನ್ನೆಲೆ ಬೆಳಗಾವಿಯಲ್ಲಿ ಅಧಿವೇಶನ ನಡೆಸದಿರಲು ನಿರ್ಧರಿಸಿರುವ ರಾಜ್ಯ ಸರ್ಕಾರ, ಪ್ರವಾಹಪೀಡಿತ ಜಿಲ್ಲೆಗಳಲ್ಲಿ ನಡೆಯುತ್ತಿರುವ ಪರಿಹಾರ, ಪುನರ್ವಸತಿ ಕಾರ್ಯಗಳಿಗೆ ತೊಂದರೆ ಆಗದಿರಲು ಈ ಕ್ರಮ ಕೈಗೊಂಡಿರುವುದಾಗಿ ಮೂಲಗಳು ತಿಳಿಸಿವೆ. ಮುಂಬರುವ ಸಚಿವ ಸಂಪುಟ ಸಭೆಯಲ್ಲಿ ಈ ಬಗ್ಗೆ ಅಂತಿಮ ನಿರ್ಧಾರ ತೆಗೆದುಕೊಳ್ಳಲಿದೆ. 2006ರಂದು ಜೆಡಿಎಸ್-ಬಿಜೆಪಿ ಸಮ್ಮಿಶ್ರ ಸರ್ಕಾರ ಅಧಿಕಾರಕ್ಕೆ ಬಂದಾಗಿನಿಂದಲೂ ಚಳಿಗಾಲದ ಅಧಿವೇಶನವನ್ನು ಬೆಳಗಾವಿಯ ಸುವರ್ಣಸೌಧದಲ್ಲಿ 10 ದಿನಗಳ ಕಾಲ ನಡೆಸಲಾಗುತ್ತಿತ್ತು. ಪ್ರತಿವರ್ಷ ಡಿಸೆಂಬರ್ ಆರಂಭದಲ್ಲಿ ನಡೆಯುವ ಅಧಿವೇಶನ ಈ ಬಾರಿ ಬಜೆಟ್ ಮಂಡನೆ ಆಗಬೇಕಿರುವ ಹಿನ್ನೆಲೆ ಅಕ್ಟೋಬರ್‌ನಲ್ಲಿಯೇ ನಡೆಯಲಿದೆ. ಉತ್ತರ ಕರ್ನಾಟಕ ಅದರಲ್ಲೂ ಬೆಳಗಾವಿ ಜಿಲ್ಲೆಯಲ್ಲಿ ನಾಲ್ಕೂವರೆ ದಶಕದ ನಂತರ ಭೀಕರ ಪ್ರವಾಹ ಬಂದೆರಗಿದ್ದು, ನಿರೀಕ್ಷೆಗೂ ಮೀರಿ ನಷ್ಟ ಸಂಭವಿಸಿದೆ. ಸರ್ಕಾರದಿಂದ ಸಮರ್ಪಕವಾಗಿ ಪರಿಹಾರ ಕಾರ್ಯ ನಡೆಯುತ್ತಿಲ್ಲ, ಕೇಂದ್ರದಿಂದ ಹಣ ಬಿಡುಗಡೆಯಾಗಿಲ್ಲ ಎಂಬ ದೂರುಗಳು ಕೇಳಿ ಬರುತ್ತಿರುವ ಹಿನ್ನೆಲೆ ಬೆಳಗಾವಿಯಲ್ಲಿ ಅಧಿವೇಶನ ನಡೆಸಿದರೆ ಉತ್ತರ ಕರ್ನಾಟಕ ಜನತೆಯ ಕೆಂಗಣ್ಣಿಗೆ ಗುರಿಯಾಗಬೇಕಾಗುತ್ತದೆ ಎಂಬ ಆತಂಕ ಸರ್ಕಾರವನ್ನು ಕಾಡುತ್ತಿದೆ. ಸದನದ ಒಳಗೆ ಪ್ರತಿಪಕ್ಷಗಳು ತರಾಟೆಗೆ ತೆಗೆದುಕೊಂಡರೆ, ಹೊರಗೆ ಸಾರ್ವಜನಿಕರ, ರೈತರ ಪ್ರತಿಭಟನೆ ಎದುರಿಸಬೇಕಾಗುತ್ತದೆ ಎಂಬುದನ್ನು ಅರಿತಿರುವ ಬಿ.ಎಸ್.ಯಡಿಯೂರಪ್ಪ ಅಧಿವೇಶನವನ್ನು ಬೆಂಗಳೂರಿನಲ್ಲಿಯೇ ನಡೆಸಲು ತೀರ್ಮಾನಿಸಿದ್ದಾರೆ ಎಂದು ಮೂಲಗಳು ಖಚಿತಪಡಿಸಿವೆ.

2